ಹರಪನಹಳ್ಳಿ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯದಲ್ಲಿ

ಓ ಎಸ್ ಃ 280/2013

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ ಎಮ್ ಆರ್ ನಾಗರಾಜ | ಪಿ ಡಬ್ಲ್ಯೂಃ | 1 |
| ತಂದೆಯ ಹೆಸರು | ಃ ಲೇಟ್ ರಾಮಣ್ಣ | ಡಿ ಡಬ್ಲ್ಯೂಃ | |
| ವಯಸ್ಸು | ಃ 46 ವರ್ಷ | ಪ್ರಮಾಣ ವಚನ ನೀಡಲಾದ | |
| ಉದ್ಯೋಗ | ಃ ತಹಶೀಲ್ದಾರರು | ದಿನಾಂಕಃ | 30.04.2014 |
| ವಾಸಸ್ಥಳ | ಃ ಹರಪನಹಳ್ಳಿ | | |

ಮುಖ್ಯ ವಿಚಾರಣೆ ಃ ಪ್ರತಿವಾದಿ ಪರ ಶ್ರೀ ಬಿ ಆರ್ ಜಿ ವಕೀಲರಿಂದಃ

ನಾನು ದಿ.07.03.2014 ರಿಂದ ಇಲ್ಲಿಯವರೆಗೆ ಹರಪನಹಳ್ಳಿ ತಾಲ್ಲೂಕು ಕಛೇರಿಯಲ್ಲಿ ತಹಶೀಲ್ದಾರರಾಗಿ ಸೇವೆ ಸಲ್ಲಿಸುತ್ತಿದ್ದೇನೆ. ನ್ಯಾಯಾಲಯದ ಸಮನ್ಸ್ ಬಂದ ಮೇರೆಗೆ ಈ ದಾವೆಗೆ ಸಂಬಂಧಿಸಿದಂತೆ ಪ್ರತಿವಾದಿ ಪರ ವಕೀಲರು ಕೇಳಿದ ಎಲ್ಲ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. 2011 ನೇ ಸಾಲಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿನ ಅನರ್ಹ ಫಲಾನುಭವಿಗಳ ಪಟ್ಟಿಯ ದೃಡಿಕೃತನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.2 ಎಂದು ಗುರುತಿಸಲಾಯಿತು. 1ನೇ ಪ್ರತಿವಾದಿ ವಿಶಾಲಕ್ಷಮ್ಮ ರವರ ಹೆಸರಿಗೆ ಮಂಜೂರಾದ ನಿವೇಶನದ ಸಂಖ್ಯೆ 183 ರ ಹಕ್ಕುಪತ್ರದ ದೃಡಿಕೃತ ನಕಲನ್ನು ಹಾಜರುಪಡಿಸಿದಲ್ಲು ಅದನ್ನು ನಿಡಿ.3 ಎಂದು ಗುರುತಿಸಲಾಯಿತು. 2012 ನೇ ಸಾಲಿನಲ್ಲಿ ಆಶ್ರಯ ಯೋಜನೆಯಡಿಯಲ್ಲಿನ ಅರ್ಹರ ಫಲಾನುಭವಿಗಳ ಪಟ್ಟಿಯ ದೃಡಿಕೃತನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.4 ಎಂದು ಗುರುತಿಸಲಾಯಿತು. ಆಶ್ರಯ ಯೋಜನೆಯಡಿಯಲ್ಲಿ ನಿರ್ಮಿಸಿರುವ ಮನೆಗಳಿಗೆ ವಿದ್ಯುತ ಸಂಪರ್ಕ ಕಲ್ಪಿಸಲು ಕೋರಿಕೊಂಡ ಪತ್ರ ಮತ್ತು ಪಲಾನುಭವಿಗಳ ಹೆಸರುಗಳ ಪಟ್ಟಿಯ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ.5 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ವಾದಿ ಪರ ಶ್ರೀ ಜಿ ಸಿ ಜಿ ವಕೀಲರಿಂದ ಃ

ಮನೆ ಸಂಖ್ಯೆ.183 ಕ್ಕೆ ನಾನು ಹಾಜರುಪಡಿಸಿದ ದಾಖಲೆಗಳನ್ನು ಹೊರತುಪಡಿಸಿ ಬೇರೆ ಯಾವುದೇ ದಾಖಲಾತಿಗಳು ನಮ್ಮ ಕಛೇರಿಯಲ್ಲಿ ಲಭ್ಯ ಇರುತ್ತವೆ ಎಂದರೆ ಸರಿ.

ಮುಂದುವರೆದ ಪಾಟೀ ಸವಾಲನ್ನು ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಿದೆ.

O.S: 29/2014
P W : 2

ಸಿವಿಲ್ ಜಡ್ಜ್ , ಹರಪನಹಳ್ಳಿ.

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ನೀಡಲಾಯ್ತು. ದಿನಾಂಕ:06.01.2015

ಮುಂದುವರೆದ ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಕೆಬಿಆರ್ ವಕೀಲರಿಂದ :

ನಾನು ಈ ದಾವೆಯಲ್ಲಿ ವಾದಿ ಸಾಕ್ಷಿ ಇರುತ್ತೇನೆ. ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ವಿಷಯ ನಿಜ ಮತ್ತು ಸತ್ಯ ಇರುತ್ತವೆ. ಆದ್ದರಿಂದ ಸದರಿ ಪ್ರಮಾಣ ಪತ್ರವನ್ನು ನನ್ನ ಮುಖ್ಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ ಎಮ್ಎಮ್ಎನ್ ವಕೀಲರಿಂದ:

ಪಾಟೀ ಸವಾಲು ಮಾಡಲು ಸಮಯ ಕೇಳಿರುತ್ತಾರೆ , ಸಮಯ ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಿದೆ.

ಸಿವಿಲ್ ಜಡ್ಜ್ , ಹರಪನಹಳ್ಳಿ.

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ನೀಡಲಾಯ್ತು. ದಿನಾಂಕ:14.01.2015

ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ ಎಕೆವಿ ವಕೀಲರಿಂದ:

ಪಿಡಬ್ಲ್ಯೂ.2 ನಾಗಪ್ಪನ ತಂದೆ ಮತ್ತು ನನ್ನ ತಂದೆ ಒಡಹುಟ್ಟಿದ ಅಣ್ಣ ತಮ್ಮಂದಿರು ಇರುತ್ತಾರೆ. ನಿಪಿ.1 ರಲ್ಲಿ ನಮೂಧಿಸಿದ ಆಸ್ತಿಗಳು ಯಾರಿಗೆ ಸೇರಿದ್ದು ಇರುತ್ತವೆ ಎಂದರೆ ಸಾಕ್ಷಿಯು ವಾದಿಯ ಅಜ್ಜಿ ಹುಚ್ಚಮ್ಮ ಇವಳ ಸ್ವಯಾರ್ಜಿತ ಆಸ್ತಿಗಳು ಇರುತ್ತವೆ ಎಂದು ಹೇಳುತ್ತಾರೆ. ನಿಪಿ.1 ರಲ್ಲಿ ನಮೂದಿಸಿ ಆಸ್ತಿಗಳು ಪಿಡಬ್ಲ್ಯೂ.2 ನಾಗಪ್ಪ ನ ಕುಟುಂಬಕ್ಕೆ ಮತ್ತು ನಮ್ಮ ಕುಟುಂಬಕ್ಕೆ ಸಂಬಂಧಿಸಿದವುಗಳು ಇರುವುದಿಲ್ಲ. ಹುಚ್ಚಮ್ಮ ನನ್ನ ದೊಡ್ಡಮ್ಮ ಇರುತ್ತಾಳೆ ಅವಳು ತೀರಿಕೊಂಡು ಸುಮಾರು 10 ರಿಂದ 12 ವರ್ಷಗಳು ಆಗಿರುತ್ತವೆ. ದಾವಾ ಆಸ್ತಿಗಳು ಅವಳು ತೀರಿಕೊಳ್ಳುವವರೆಗೂ ಅವಳೇ ಸ್ವಾಧೀನದಲ್ಲಿ ಇದ್ದಳು. ಸದರಿ ಹುಚ್ಚಮ್ಮ ಇವಳು ವಾದಿ ನಿಂಗರಾಜನಿಗೆ ದಾನಪತ್ರ ಬರೆದುಕೊಟ್ಟಿರುತ್ತಾಳೆ. ಹುಚ್ಚಮ್ಮ ಇವಳು ನಿಪಿ.1 ನ್ನು ವಾದಿಗೆ ಬರೆದುಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ.1 ರಲ್ಲಿರುವ ಖಣವು ವಾದಿಯ ಸ್ವಾಧೀನದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಖಣವು ಸರ್ಕಾರಕ್ಕೆ ಸೇರಿದ್ದು ಇರುತ್ತದೆ ಎಂದರೆ ಸರಿಯಲ್ಲ. ವಾದಿ ಮತ್ತು ಅವನ ತಂದೆ ನನ್ನ ಸಂಬಂಧಿಕರು ಇರುವುದರಿಂದ ಅವನಿಗೆ ಸಹಾಯ ಮಾಡುವ ಸಲುವಾಗಿ ಅವನ ಪರವಾಗಿ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ

ಮರು ವಿಚಾರಣೆ: ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಿದೆ.

O.S: 29/2014
P W : 2
Date: 14.01.2015

**ಸಿವಿಲ್ ಜಡ್ಜ್ , ಹರಪನಹಳ್ಳಿ.**